**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು–1**

ಸಂಖ್ಯೆ: ಪ್ರಾಶಿಅ/ಆರ್.ಟಿ.ಇ/ಪ್ರವೇಶ ಪ್ರಕ್ರಿಯೆ20–21/19–20 ದಿ: 21.7.2020

**:: ಸುತ್ತೋಲೆ ::**

ವಿಷಯ:–2020–21 ನೇ ಸಾಲಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009ರ ಸೆಕ್ಷನ್ 12(1)(ಬಿ) ಮತ್ತು 12(1)(ಸಿ) ಅಡಿ ಅನಾನುಕೂಲ ಪರಿಸ್ಥಿತಿಯಲ್ಲಿರುವ ಹಾಗೂ ದುರ್ಬಲ ವರ್ಗದ ಮಕ್ಕಳ ದಾಖಲಾತಿ ಬಗ್ಗೆ ಪರಿಷ್ಕೃತ ವೇಳಾಪಟ್ಟಿ.

ಉಲ್ಲೇಖ: 1. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ 2009.
2. ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು 2012.
3. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ ದಿ: 27.2.2020 ಮತ್ತು 3.7.2020

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2020–21ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1) (ಬಿ) ಮತ್ತು 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ಉಲ್ಲೇಖ(3) ರಲ್ಲಿ ನಿಗಧಿಪಡಿಸಿದ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದ್ದು ಈ ಕೆಳಗಿನಂತೆ ವೇಳಾಪಟ್ಟಿಯನ್ನು ಪರಿಷ್ಕರಿಸಲಾಗಿದೆ.

<u>2020–21ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ ಅಡಿ ದಾಖಲಾತಿಗೆ ನಿಗಧಿಪಡಿಸಿರುವ ಪರಿಷ್ಕೃತ ವೇಳಾಪಟ್ಟಿ</u>

| ಕ್ರ ಸಂ | ಚಟುವಟಿಕೆ | ದಿನಾಂಕ | ಕ್ರಮ |
|---|---|---|---|
| 1) | ಆನ್ ಲೈನ್ ತಂತ್ರಾಂಶದ ಮೂಲಕ ಮೊದಲ ಸುತ್ತಿನ ಸೀಟು ಹಂಚಿಕೆ | 29.07.2020 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್. |
| 2) | ಶಾಲೆಗಳಲ್ಲಿ ದಾಖಲಾತಿ ಪ್ರಾರಂಭ | 30.07.2020 ರಿಂದ 10.08.2020 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 3) | ಶಾಲೆಗಳಲ್ಲಿ ದಾಖಲಾದ ಮೊದಲ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು | 30.07.2020 ರಿಂದ 10.08.2020 | ಸಂಬಂಧಿಸಿದ ಶಾಲಾ ಮುಖ್ಯಸ್ಥರು, |
| 4) | ಆನ್ ಲೈನ್ ತಂತ್ರಾಂಶದ ಮೂಲಕ ಎರಡನೇ ಸುತ್ತಿನ ಸೀಟು ಹಂಚಿಕೆ | 17.08.2020 | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ, ಇ–ಆಡಳಿತ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್ |
| 5) | ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳಿಗೆ ಶಾಲೆಗಳಲ್ಲಿ ದಾಖಲಾತಿ ಅವಧಿ | 18.08.2020 ರಿಂದ 25.08.2020 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |

| | | | |
|---|---|---|---|
| 6) | ಶಾಲೆಗಳಲ್ಲಿ ದಾಖಲಾದ ಎರಡನೇ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಳವಡಿಸುವುದು | 18.08.2020 ರಿಂದ 25.08.20200 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು |

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

**ರವರಿಗೆ,**

(1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ

(2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ